ಶಿಕ್ಷಣದ ಹಕ್ಕು
ಸರ್ವ ಶಿಕ್ಷಣ ಅಭಿಯಾನ
ಎಲ್ಲರೂ ಕಲಿಯೋಣ – ಎಲ್ಲರೂ ಬೆಳೆಯೋಣ
**ಹೊಸ ಸಾರ್ವಜನಿಕ ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು – 560 001**

ಸಂಖ್ಯೆ: ಸಶಿಅ/ಒ.ಎಸ್.ಸಿ/Hostels/12–13 ದಿನಾಂಕ: 24.04.2013

## ಜ್ಞಾಪನ

ವಿಷಯ: 2013–14ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ವಿದ್ಯಾರ್ಥಿ ನಿಲಯಗಳಲ್ಲಿ ವಿಶೇಷ ತರಬೇತಿ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸುವ ಬಗ್ಗೆ.
ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ4:ಸಿಆರ್ 34 : 2012–13. ದಿನಾಂಕ: 04.04.2013

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2013–14ನೇ ಸಾಲಿಗೆ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ, ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿದ್ದು, ಅದರಂತೆ ಸಮಾಜ ಕಲ್ಯಾಣ ಇಲಾಖೆಯಿಂದ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ವಿಶೇಷ ತರಬೇತಿ ನಡೆಸಲು ಅವಕಾಶ ಕಲ್ಪಿಸಿದ್ದು, ಈ ಸಂಬಂಧ ಕಲಿಕಾ ಸಾಮಗ್ರಿಗಳನ್ನು ಹಾಗೂ ವಿಶೇಷ ತರಬೇತಿ ನೀಡಲು ಒಬ್ಬ ಸ್ವಯಂ ಸೇವಕರನ್ನು ಸರ್ವ ಶಿಕ್ಷಣ ಅಭಿಯಾನದ ವತಿಯಿಂದ ಒದಗಿಸಲು ಉಲ್ಲೇಖ ಪತ್ರದಲ್ಲಿ ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಸರ್ವ ಶಿಕ್ಷಣ ಅಭಿಯಾನದ ಅಧಿಕಾರಿಗಳು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳನ್ನು ಭೇಟಿ ಮಾಡಿ, ವಿಶೇಷ ತರಬೇತಿಗೆ ಒಳಪಡಿಸುವ ಮಕ್ಕಳನ್ನು ವಸತಿನಿಲಯಗಳಲ್ಲಿ ದಾಖಲಿಸಿ, ಮಕ್ಕಳ ಸಂಖ್ಯೆಯನ್ನು ಈ ಕೆಳಗಿನ ನಮೂನೆಯಲ್ಲಿ ಕಳುಹಿಸುವುದು. ಹಾಗೂ ಈ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಅದರ ಒಂದು ಪ್ರತಿಯನ್ನು ಈ ಕಛೇರಿಗೆ ದಿನಾಂಕ: 30.04.2013 ರೊಳಗೆ ಕಳುಹಿಸಲು ತಿಳಿಸಿದೆ. (ಉಲ್ಲೇಖ ಪತ್ರವನ್ನು ಇದರೊಂದಿಗೆ ಲಗತ್ತಿಸಿದೆ.)

| ಕ್ರ. ಸಂ. | ಜಿಲ್ಲೆಯ ಹೆಸರು. | ವಸತಿ ನಿಲಯಗಳ ಹೆಸರು ಮತ್ತು ವಿಳಾಸ | ವಸತಿ ನಿಲಯಗಳಲ್ಲಿ ವಿಶೇಷ ತರಬೇತಿಗೆ ಒಳಪಡುವ ಮಕ್ಕಳ ಸಂಖ್ಯೆ | | | ಸ್ವಯಂ ಸೇವಕರ ಹೆಸರು ಮತ್ತು ದೂರವಾಣಿ ಸಂಖ್ಯೆ | ಷರಾ |
|---|---|---|---|---|---|---|---|
| | | | ಗಂಡು | ಹೆಣ್ಣು | ಒಟ್ಟು | | |
| | | | | | | | |

ನಿರ್ದೇಶಕರು(ಕಾರ್ಯಕ್ರಮಗಳು)
ಸರ್ವ ಶಿಕ್ಷಣ ಅಭಿಯಾನ,
ಬೆಂಗಳೂರು.

ಪ್ರತಿಯನ್ನು

1) ರಾಜ್ಯದ ಎಲ್ಲಾ ಜಿಲ್ಲೆಗಳ ಡಿ.ಡಿ.ಪಿ.ಐ(ಆ) , ಡಿ.ವೈ.ಪಿ.ಸಿ ಇವರಿಗೆ ಸೂಕ್ತ ಕ್ರಮಕ್ಕಾಗಿ ಹಾಗೂ ಇದರ ಒಂದು ಪ್ರತಿಯನ್ನು ಸಂಬಂಧಿಸಿದ ಬ್ಲಾಕ್ ಮತ್ತು ಕ್ಲಸ್ಟರ್ ಹಂತದ ಅಧಿಕಾರಿಗಳಿಗೆ ಕೂಡಲೇ ಕಳುಹಿಸಲು ತಿಳಿಸಿದೆ.

ದೂರವಾಣಿ : 080 22483040, 22483041 ಫ್ಯಾಕ್ಸ್ : 22126718 www.schooleducation.kar.nic.in/SSA

ಕರ್ನಾಟಕ ಸರ್ಕಾರ

ಸಂ: ಸಕನಿ: ಇಡಿ. 4 .: ಸಿಆರ್. 34 : 2012-13

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್. ಅಂಬೇಡ್ಕರ್ ವೀಧಿ,
ಬೆಂಗಳೂರು- 560 001.

ದಿನಾಂಕ: 4-4-2013.

ನಿರ್ದೇಶಕರು (ಕಾರ್ಯಕ್ರಮಗಳು)
ಸರ್ವ ಶಿಕ್ಷಣ ಅಭಿಯಾನ,
ಹೊಸ ಸಾರ್ವಜನಿಕ ಕಟ್ಟಡಗಳು,
ಕೆ.ಆರ್.ವೃತ್ತ,
ಬೆಂಗಳೂರು- 560 001.

ಮಾನ್ಯರೇ,

ವಿಷಯ : 2013-14ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ವಿದ್ಯಾರ್ಥಿ ನಿಲಯಗಳಲ್ಲಿ ವಿಶೇಷ ತರಬೇತಿ ಮತ್ತು ವಸತಿ ಸೌಲಭ್ಯವನ್ನು ಕಲ್ಪಿಸಿ ಕೊಡುವ ಬಗ್ಗೆ.

ಉಲ್ಲೇಖ : ನಿಮ್ಮ ಪತ್ರ ಸಂ: ಸಶಿಅ: ಒಒಎಸ್‌ಸಿ: ಹಾಸ್ಟೆಲ್ : 2012-13, ದಿನಾಂಕ: 13-3-2013.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿನ ಅಂಶಗಳನ್ನು ಪರಿಶೀಲಿಸಲಾಯಿತು. 2013-14ನೇ ಸಾಲಿನಿಂದ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳಲ್ಲಿ ದಾಖಲು ಮಾಡಲಾಗುವ ಶಾಲೆಯಿಂದ ಹೊರಗುಳಿದ ಮಕ್ಕಳಿಗೆ ತಮ್ಮಿಂದ ವಿಶೇಷ ತರಬೇತಿಯನ್ನು ನೀಡಲು ಅನುಮತಿ ನೀಡಲಾಗಿದೆ. ಈ ಸಂಬಂಧ ಕಲಿಕಾ ಸಾಮಗ್ರಿಗಳನ್ನು ಹಾಗೂ ವಿಶೇಷ ತರಬೇತಿ ನೀಡಲು ಒಬ್ಬ ಸ್ವಯಂ ಸೇವಕರನ್ನು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ನಿಮ್ಮ ಇಲಾಖಾವತಿ ಯಿಂದ ಒದಗಿಸಲು ಕ್ರಮ ತೆಗೆದುಕೊಳ್ಳುವಂತೆ ಕೋರಲಾಗಿದೆ.

ತಮ್ಮ ನಂಬುಗೆಯ,

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ,ಬೆಂಗಳೂರು.

E:\My Documents\Srinivas\ed.4 cr.34.doc